ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ.
ಬೆಂಗಳೂರು–560001.

ಸಂಖ್ಯೆ: ಕಾಶಿಇ/ಶೈವಿ/102/ಜಾಅಸ/2023–24

ದಿನಾಂಕ: 27.09.2023

## ಸುತ್ತೋಲೆ

ವಿಷಯ: 'ಜಾಗೃತಿ ಅರಿವು ಸಪ್ತಾಹ – 2023' (Vigilance Awareness Week-2023) ನ್ನು ಆಚರಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂ:ಸಿಆಸುಇ/175/ಸೇಲೋಯು/2023 ಬೆಂಗಳೂರು ದಿನಾಂಕ:16.08.2023.
2. ಕೇಂದ್ರ ವಿಚಕ್ಷಣಾ ಆಯೋಗ, ನವದೆಹಲಿ ಇವರ ದಿನಾಂಕ:02.08.2023ರ ಸುತ್ತೋಲೆ ಸಂಖ್ಯೆ:023/ವಿಜಿಎಲ್/ 035/556448.

* * * * * *

ಭ್ರಷ್ಟಾಚಾರ ವಿರುದ್ಧ ಜಾಗೃತಿ ಮೂಡಿಸಲು 'ಜಾಗೃತಿ ಅರಿವು ಸಪ್ತಾಹ' ವನ್ನು ಆಚರಿಸುವ ಪೂರ್ವಭಾವಿಯಾಗಿ ದಿನಾಂಕ:16.08.2023 ರಿಂದ 15.11.2023 ರವರೆಗೆ ವಿವಿಧ ಆಂತರಿಕ ಚಟುವಟಿಕೆಗಳನ್ನು ಕೈಗೊಳ್ಳುವ ಮೂಲಕ ಭ್ರಷ್ಟಾಚಾರ ವಿರುದ್ಧ ಜಾಗೃತಿ ಮೂಡಿಸುವ ಅಭಿಯಾನವನ್ನು ಕೈಗೊಂಡಿದ್ದು, ಅದನ್ನು ಕಾರ್ಯರೂಪಕ್ಕೆ ತರುವಂತೆ ಕೇಂದ್ರ ವಿಚಕ್ಷಣಾ ಆಯೋಗವು ಎಲ್ಲಾ ರಾಜ್ಯಗಳಿಗೆ ದಿನಾಂಕ:02.08.2023ರ ಸುತ್ತೋಲೆಯಲ್ಲಿ ಸೂಚಿಸಿದೆ (ಪ್ರತಿ ಲಗತ್ತಿಸಿದೆ)

ಅದರಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿ, ರವಾನಿಸುತ್ತಾ, ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ತಮ್ಮ ಕಛೇರಿಯ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ 'ಜಾಗೃತಿ ಅರಿವು ಸಪ್ತಾಹ–2023" (Vigilance Awareness Week-2023) ಆಚರಿಸಲು ಅವಶ್ಯ ಕ್ರಮ ಕೈಗೊಳ್ಳುವಂತೆ ಪ್ರಾಂಶುಪಾಲರುಗಳಿಗೆ ಸೂಚಿಸಲು ತಿಳಿಸಿದೆ.

"ಜಾಗೃತಿ ಅರಿವು ಸಪ್ತಾಹ–2023" ವನ್ನು ಆಚರಿಸಿದ ಬಗ್ಗೆ ತಮ್ಮ ಕಛೇರಿ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳಿಂದ ಕ್ರೋಢೀಕೃತ ಅನುಪಾಲನಾ ವರದಿಯನ್ನು ಸಪ್ತಾಹ ಮುಗಿದ ಒಂದು ವಾರದೊಳಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಜಾಗೃತ ವಿಭಾಗ), ಕೊಠಡಿ ಸಂಖ್ಯೆ:114, ಮೊದಲನೇ ಮಹಡಿ, ವಿಕಾಸಸೌಧ, ಬೆಂಗಳೂರು–01 ಇಲ್ಲಿಗೆ ಕಡ್ಡಾಯವಾಗಿ ಸಲ್ಲಿಸುವಂತೆಯೂ ಸಹ ಸೂಚಿಸಲಾಗಿದೆ.

ಅಡಕ: ಉಲ್ಲೇಖಿತ ಪತ್ರದ ಪ್ರತಿ

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ಕಛೇರಿಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಜಂಟಿ ನಿರ್ದೇಶಕರ ಮುಖಾಂತರ

ಪ್ರತಿಯನ್ನು:

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರದ ಸಚಿವಾಲಯ, ವಿಕಾಸಸೌಧ ಬೆಂಗಳೂರು–560001.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹು ಮಹಡಿಗಳ ಕಟ್ಟಡ, ಬೆಂಗಳೂರು–01.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4) ಕಛೇರಿ ಪ್ರತಿ.